ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 08 ನೇ ಡಿಸೆಂಬರ್, 2020

ಕೆ.ಐ.ಎ.ಡಿ.ಬಿ ವತಿಯಿಂದ ಕೈಗೊಂಡಿರುವ ಕಾಮಗಾರಿಗಳ ಬಗ್ಗೆ

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

113 (126) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೆ.ಐ.ಎ.ಡಿ.ಬಿ ವತಿಯಿಂದ ಕಳೆದ 3 ವರ್ಷಗಳಲ್ಲಿ ಕೈಗೊಂಡಿರುವ ವಿದ್ಯುತ್ ಮತ್ತು ಸಿವಿಲ್ ಕಾಮಗಾರಿಗಳಾವುವು ; ಈ ಕಾಮಗಾರಿಗಳಿಗಾಗಿ ಬಿಡುಗಡೆಯಾದ ಅನುದಾನವೆಷ್ಟು ; ಈ ಕಾಮಗಾರಿಗಳ ಟೆಂಡರ್ ಮೊತ್ತವೆಷ್ಟು; ಈ ಕಾಮಗಾರಿಗಳನ್ನು ಪಡೆದಿರುವ ಗುತ್ತಿಗೆದಾರರು ಯಾರ್ಯಾರು ; (ಆದೇಶ ಸಹಿತ ಕಾಮಗಾರಿವಾರು ವಿವರ ನೀಡುವುದು)

(ಆ) ಈ ಕಾಮಗಾರಿಗಳ ಟೆಂಡರ್ ಅನ್ನು ಕೆಲವೇ ಗುತ್ತಿಗೆದಾರರಿಗೆ ಅನುಕೂಲವಾಗುವಂತೆ ಮಾಡಲಾಗಿದ್ದು, ಕಾಮಗಾರಿಗಳಲ್ಲಿ ಭಾರಿ ಅವ್ಯವಹಾರಗಳು ನಡೆದಿರುವುದಾಗಿ ಆರೋಪಗಳು ಕೇಳಿ ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸಂಬಂಧಪಟ್ಟವರ ವಿರುದ್ಧ ಕೈಗೊಂಡಿರುವ ಕ್ರಮಗಳೇನು ? (ಪ್ರಕರಣವಾರು ಮಾಹಿತಿ ನೀಡುವುದು)